# <u>ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿ.</u>

**ದಿನಾಂಕ: 17/02/2026.**

**<u>ಅಧಿಸೂಚನೆ ಸಂಖ್ಯೆ: 01/2026.</u>**

2025-26 ನೇ ಸಾಲಿಗೆ ನವ ಕಾನೂನು ಪದವೀಧರರಿಗೆ ಪ್ರೋತ್ಸಾಹಧನ ನೀಡುವ ಯೋಜನೆಯನ್ನು ಅನುಷ್ಠಾನಗೊಳಿಸಲು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹಾವೇರಿ ಇವರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ರಚಿಸಲಾಗಿರುತ್ತದೆ. ಅದರಂತೆ, ಸರ್ಕಾರದ ಆದೇಶದ ಸಂಖ್ಯೆ ಲಾ-ಎಲ್ಎಡಿ/110/2026, ಬೆಂಗಳೂರು, ದಿನಾಂಕ 09/02/2026 ರನ್ವಯ 2025-26 ನೇ ಸಾಲಿಗೆ ನವ ಕಾನೂನು ಪದವೀಧರರಿಗೆ ಪ್ರೋತ್ಸಾಹಧನ ನೀಡುವ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಅರ್ಹ ಕಾನೂನು ಪದವೀಧರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ.

ನಿಗದಿತ ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಯನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿ, ಇವರ ಅಧಿಕೃತ ವೆಬ್‌ಸೈಟ್ https://haveri.dcourts.gov.in/document-category/notification/ ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ಅರ್ಜಿಯ ನಿಗದಿತ ನಮೂನೆಯನ್ನು ಈ ಅಧಿಸೂಚನೆಯೊಂದಿಗೆ ಲಗತ್ತಿಸಲಾಗಿದೆ.

2025-26 ನೇ ಸಾಲಿಗೆ ನವ ಕಾನೂನು ಪದವೀಧರರಿಗೆ ಪ್ರೋತ್ಸಾಹಧನ ನೀಡುವ ಯೋಜನೆಯಡಿ ಅರ್ಜಿ ಸಲ್ಲಿಸುವ ಅರ್ಹ ಅಭ್ಯರ್ಥಿಗಳು ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನಡಿಯಲ್ಲಿ ದಿನಾಂಕ 01/06/2024 ರಿಂದ 31/05/2025 ರವರೆಗಿನ ಅವಧಿಯಲ್ಲಿ ವಕೀಲ ವೃತ್ತಿಗೆ ನೋಂದಾಯಿಸಿದವರು ಮಾತ್ರ ಅರ್ಹರಿರುತ್ತಾರೆ.

ಈ ಯೋಜನೆಯಡಿಯಲ್ಲಿ ಅರ್ಜಿ ಸಲ್ಲಿಸುವ ಅಭ್ಯರ್ಥಿಯ/ ಕುಟುಂಬದ ವಾರ್ಷಿಕ ವರಮಾನದ ಮಿತಿಯು ರೂ.40,000/- (ನಲವತ್ತು ಸಾವಿರ ರೂಪಾಯಿಗಳು) ಗಳನ್ನು ಮೀರಿರಬಾರದು.

ಸದರಿ ಸೌಲಭ್ಯವನ್ನು ಈ ಯೋಜನೆ/ ಇತರೆ ಯೋಜನೆಯಡಿ ಅಥವಾ ರಾಜ್ಯ ಸರ್ಕಾರದ ಬೇರೆ ಯಾವುದೇ ಇಲಾಖೆಯ ಯೋಜನೆಯಡಿ ಆಯ್ಕೆಗೊಂಡ ಫಲಾನುಭವಿಗಳು ಈ ಯೋಜನೆಯ ಸೌಲಭ್ಯಗಳಿಗೆ ಅರ್ಹರಾಗಿರುವುದಿಲ್ಲ.

ಅರ್ಜಿ ಸಲ್ಲಿಸುವವರು ಹೊಸದಾಗಿ ವಕೀಲ ವೃತ್ತಿಯಲ್ಲಿ ತೊಡಗುವ ಕಾನೂನು ಪದವೀಧರರಾಗಿರಬೇಕು ಮತ್ತು ಬಾರ್ ಕೌನ್ಸಿಲ್‌ನಲ್ಲಿ ನೋಂದಾಯಿಸಿದ ನಂತರ ಸ್ಥಳೀಯ ಸಂಬಂಧಿಸಿದ ವಕೀಲರ ಸಂಘದ ಅಧ್ಯಕ್ಷರಿಂದ ಪ್ರಮಾಣಪತ್ರ ಪಡೆದು ತಾಲೂಕು ಮಟ್ಟದಲ್ಲಿ ಹಿರಿಯ ನ್ಯಾಯಾಧೀಶರುಗಳ ಮುಖಾಂತರ ಮತ್ತು ಜಿಲ್ಲಾ ಹಂತದಲ್ಲಿ ನೇರವಾಗಿ ಸಮಿತಿಯ ಅಧ್ಯಕ್ಷರಾದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹಾವೇರಿ ಇವರಿಗೆ ಸಲ್ಲಿಸಬೇಕು.

ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ 17/03/2026 ರ ಸಾಯಂಕಾಲ 6-00 ಘಂಟೆಯವರೆಗೆ ಇರುತ್ತದೆ.

(ಬಿರಾದಾರ ದೇವಿಂದ್ರಪ್ಪಾ ಎನ್.)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಹಾವೇರಿ.

1. ಪ್ರತಿಯನ್ನು ಸರ್ಕಾರದ ಅಧೀನ ಕಾರ್ಯದರ್ಶಿಗಳು, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ (ಆಡಳಿತ-2) ವಿಧಾನಸೌಧ, ಬೆಂಗಳೂರು, ಇವರಿಗೆ ಮಾಹಿತಿಗಾಗಿ ರವಾನಿಸಲಾಗಿದೆ.

ಪ್ರತಿಯನ್ನು ಮಾಹಿತಿ ಮತ್ತು ವ್ಯಾಪಕ ಪ್ರಚಾರಕ್ಕಾಗಿಃ

2. ಮಾನ್ಯ ಜಿಲ್ಲಾಧಿಕಾರಿಗಳು, ಹಾವೇರಿ.
3. ಹಾವೇರಿ ಘಟಕದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ನ್ಯಾಯಾಲಯಗಳಿಗೆ ಮಾಹಿತಿ ಮತ್ತು ನ್ಯಾಯಾಲಯದ ಸೂಚನಾ ಫಲಕಕ್ಕೆ ಅಂಟಿಸಲು.
4. ಸರ್ಕಾರಿ ಅಭಿಯೋಜಕರು, ಹಾವೇರಿ.
5. ಸಹಾಯಕ ಸರ್ಕಾರಿ ಅಭಿಯೋಜಕರು ಬ್ಯಾಡಗಿ, ಹಿರೇಕೆರೂರು, ರಾಣೇಬೆನ್ನೂರು, ಹಾನಗಲ್ಲ, ಶಿಗ್ಗಾಂವ, ಸವಣೂರು ಮತ್ತು ರಟ್ಟೀಹಳ್ಳಿ.
6. ಅಧ್ಯಕ್ಷರು, ಜಿಲ್ಲಾ ನ್ಯಾಯವಾದಿಗಳ ಸಂಘ, ಹಾವೇರಿ.

7. ಅಧ್ಯಕ್ಷರು, ನ್ಯಾಯವಾದಿಗಳ ಸಂಘ, ಬ್ಯಾಡಗಿ, ಹಿರೇಕೆರೂರು, ರಾಣೇಬೆನ್ನೂರು, ಹಾನಗಲ್ಲ, ಶಿಗ್ಗಾಂವ, ಸವಣೂರು ಮತ್ತು ರಟ್ಟೀಹಳ್ಳಿ.

8. ಸಾಫ್ಟವೇರ್ ಟೆಕ್ನಿಷಿಯನ್, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿ.

9. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿ ಸೂಚನಾ ಫಲಕಕ್ಕೆ.

10. ಕಛೇರಿ ಕಡತಕ್ಕೆ

# ಅನುಬಂಧ-1

**ಕರ್ನಾಟಕ ಸರ್ಕಾರದ ಕಾನೂನು ಇಲಾಖೆಯಡಿಯಲ್ಲಿ ನವ ಕಾನೂನು ಪದವೀಧರರಿಗೆ ಪ್ರೋತ್ಸಾಹಧನ ನೀಡುವ ಯೋಜನೆಯ ನಮೂನೆ.**

| | | |
|---|---|---|
| 1) | **ಅರ್ಜಿದಾರರ ಹೆಸರು:** (ಎಸ್.ಎಸ್.ಎಲ್.ಸಿ. ಅಂಕಪಟ್ಟಿಯಲ್ಲಿರುವಂತೆ) | |
| 2) | **ಅರ್ಜಿದಾರರ ತಂದೆ/ಗಂಡನ ಹೆಸರು:** (ಎಸ್.ಎಸ್.ಎಲ್.ಸಿ. ಅಂಕಪಟ್ಟಿಯಲ್ಲಿರುವಂತೆ) | |
| 3) | **ಹುಟ್ಟಿದ ದಿನಾಂಕ:** (ಎಸ್.ಎಸ್.ಎಲ್.ಸಿ. ಅಂಕಪಟ್ಟಿಯಲ್ಲಿರುವಂತೆ) | |
| 4) | **ವಿಳಾಸ ಪ್ರಸ್ತುತ :** | |
| | **ಖಾಯಂ ವಿಳಾಸ :** | |
| | **ಕಛೇರಿ ವಿಳಾಸ :** | |
| 5) | **ವಿವಾಹಿತರೇ?** | |
| 6) | **ಭಾರತೀಯ ಪ್ರಜೆಯೇ?** | |
| 7) | **ಧರ್ಮ** | |

| | | | | |
|---|---|---|---|---|
| 8) | **ಜಾತಿ & ಪ್ರವರ್ಗ** | | | |
| 9) | **ಶೈಕ್ಷಣಿಕ ವಿದ್ಯಾರ್ಹತೆಗಳು:** | | | |
| **ಕ್ರ. ಸಂ.** | **ತೇರ್ಗಡೆಗೊಂಡ ವಿದ್ಯಾರ್ಹತೆ** | **ವರ್ಷ** | **ಶೇಕಡಾ ಅಂಕ** | **ಪ್ರಮಾಣ ಪತ್ರದ ಪ್ರತಿ ಲಗತ್ತಿಸುವುದು.** |
| 1 | ಎಸ್.ಎಸ್.ಎಲ್.ಸಿ. (10th) | | | |
| 2 | ಪಿ.ಯು.ಸಿ. (12th) | | | |
| 3 | ಪದವಿ | | | |
| 4 | ಕಾನೂನು ಪದವಿ | | | |
| 10) | **ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನಲ್ಲಿ ನೋಂದಾಯಿಸಿದ ಸಂಖ್ಯೆ ಮತ್ತು ದಿನಾಂಕ: (ಸಂಬಂಧಿತ ದಾಖಲೆಯ ಪ್ರತಿ)** | | | |
| 11) | **ಪ್ರಸ್ತುತ ವಕೀಲ ವೃತ್ತಿ ನಡೆಸುತ್ತಿದ್ದಲ್ಲಿ ವಿವರ: (ಸಂಬಂಧಿತ ದಾಖಲೆಯ ಪ್ರತಿ)** | | | |
| 12) | **ಇತರೆ ಮಾಹಿತಿ:** | | | |

**ಲಾ-ಎಲ್‌ಎಡಿ/110/2026**

ಮೇಲಿನ ನಮೂನೆಯಲ್ಲಿ ನೀಡಲಾಗಿರುವ ಮಾಹಿತಿಯನ್ನು ನಾನು ಪ್ರಜ್ಞಾಪೂರ್ವಕವಾಗಿ ಸತ್ಯವೆಂದು ಅರಿತು ನೀಡಿರುತ್ತೇನೆ. ಒಂದು ವೇಳೆ ಈ ಮಾಹಿತಿಯಲ್ಲಿ ಯಾವುದೇ ಅಂಶಗಳು ಸತ್ಯಾಂಶದಿಂದ ಕೂಡಿಲ್ಲವೆಂದು ತಿಳಿದು ಬಂದಲ್ಲಿ ಆಯ್ಕೆ ಪ್ರಾಧಿಕಾರವು/ ಸರ್ಕಾರವು ನಿಯಮಾನುಸಾರ ನನ್ನ ಮೇಲೆ ಅವಶ್ಯಕ ಕಾನೂನು ಕ್ರಮ ಜರುಗಿಸಬಹುದೆಂದು ನಾನು ಒಪ್ಪಿಗೆಯನ್ನು ಈ ಮೂಲಕ ನೀಡಿರುತ್ತೇನೆ.

**ಅರ್ಜಿದಾರರ ಸಹಿ.**

(ಹೆಸರು)

ಮೊಬೈಲ್ ನಂ: ..............

## ಅನುಬಂಧ-3

**Details of Law Graduates (Beneficiaries) applied during the year 2025-26.**

| | |
|---|---|
| District | |
| Taluk | |
| Beneficiary Name (Eng) | |
| Beneficiary Name (Kan) | |
| Beneficiary Address (Eng) | |
| Beneficiary Address (Kan) | |
| DOB DD/MM/YEAR | |
| Gender | |
| Bank Details:<br><br>Name of the Bank & Branch | |
| IFSC Code | |
| Bank Account Number | |
| Mobile No. | |
| Aadhaar Number | |

- **Note: The Beneficiary details should be provided as per Aadhaar Card.**